ಎರಡನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು

ಸ್ಪೆಷಲ್ ಕೇಸ್ ನಂಃ 113/2014
(ಫ್ರಾಸಾ-8 ಚಾಸಾ-17 )
ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು
ದಿಃ 02.01.2023.

| | | |
|---|---|---|
| ಸಾಕ್ಷಿದಾರರ ಹೆಸರು | - | ತುಳಸಿನಾಯ್ಕು |
| ತಂದೆಯ ಹೆಸರು | - | ಮುನಿಯನಾಯ್ಕ |
| ವಯಸ್ಸು | - | 45 ವರ್ಷ, |
| ಉದ್ಯೋಗ | - | ವ್ಯವಸಾಯ |
| ವಾಸ | - | ಕೆಳಗಿನ ನಾಯಕಂಡ್ರಹಳ್ಳಿ |

ಮುಖ್ಯ ವಿಚಾರಣೆಃ ಮಾನ್ಯ ವಿಶೇಷ ಸರ್ಕಾರಿ ಅಭಿಯೋಜಕರಿಂದಃ

ಈಗ ತೋರಿಸಲಾದ ದಾಖಲೆ ಮೇಲೆ ನನ್ನ ಸಹಿ ಇದೆ. ಸಾಕ್ಷಿಗೆ ತೋರಿಸಿದ ದಾಖಲೆ ನಿಪಿ-14 ಮಹಜರ್ ಇದ್ದು ಅದರಲ್ಲಿರುವ ಅವರ ಸಹಿಯನ್ನು ನಿಪಿ-14(ಬಿ) ಎಂದು ಗುರ್ತಿಸಲಾಯಿತು. ನಿಪಿ-14 ಕ್ಕೆ ಈಗ ಸುಮಾರು 4-5 ವರ್ಷಗಳ ಹಿಂದೆ ನಮ್ಮ ಊರಿನ ಬಸ್ ಸ್ಟಾಂಡ್ ಹತ್ತಿರ ಸಹಿ ಮಾಡಿದ್ದೇನೆ. ಪೋಲಿಸರು ನಿಪಿ-14 ಕ್ಕೆ ಸಹಿ ಮಾಡು ಎಂದು ಕೇಳಿದ್ದರಿಂದ ಅದಕ್ಕೆ ಸಹಿ ಮಾಡಿದ್ದೇನೆ. ಅದರಲ್ಲಿನ ಮಾಹಿತಿ ನನಗೆ ಇಲ್ಲ. ಫ್ರಾಸಾ-2 ಕುಮಾರ್ ಈತನ ಪರಿಚಯ ಇಲ್ಲ. ಆತ ನಮ್ಮ ಸಮಕ್ಷಮ ಪೋಲಿಸರಿಗೆ ಯಾವುದೇ ಸ್ಥಳವನ್ನು ತೋರಿಸಿಲ್ಲ. ಪೋಲಿಸರು ನಮ್ಮ ಸಮಕ್ಷಮ ಯಾವುದೇ ಮಹಜರ್ ಮಾಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಎಸ್ ಪಿಪಿ ರವರು ವಿನಂತಿಸಿದ್ದರಿಂದ ಅನುಮತಿ ನೀಡಲಾಯಿತು.)

ಪಾಟೀ ಸವಾಲುಃ ಮಾನ್ಯ ವಿಶೇಷ ಸರ್ಕಾರಿ ಅಭಿಯೋಜಕರಿಂದಃ

2. ದಿಃ27.05.2014 ರಂದು ಸಂಜೆ ಸುಮಾರು 4 ಘಂಟೆಗೆ ಪೋಲಿಸರು ನನ್ನನ್ನು, ಚಾಸಾ-16 ಇವರನ್ನು ಸಹ ಪಂಚಸಾಕ್ಷಿದಾರರಾಗಿ ನಮ್ಮ ಊರಿನ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಬಳಿಯ ರಸ್ತೆಯಲ್ಲಿ ಕರೆಸಿದ್ದರು ಎಂದರೆ ಸರಿಯಲ್ಲ. ಫ್ರಾಸಾ-2 ಹಾಜರಿದ್ದು ದಿಃ05.08.2013 ರಂದು ಸಂಜೆ 6 ಘಂಟೆಗೆ ಆರೋಪಿ ರವಿನಾಯ್ಕು ಮತ್ತು

ಆತನ ಕಡೆಯವರು ಮೃತನ ಮೇಲೆ ದೊಣ್ಣೆಗಳಿಂದ ಹಲ್ಲೆ ಮಾಡಿದ ಸ್ಥಳ ಎಂದು ಶಾಲೆಯ ಮುಂಭಾಗದ ಮಣ್ಣು ರಸ್ತೆಯ ಸ್ಥಳವನ್ನು ತೋರಿಸಿದರು ಎಂದರೆ ಸರಿಯಲ್ಲ. ಆಗ ಪಿಎಸ್‌ಐರವರು ನಿಪಿ-14 ರಂತೆ ನಮ್ಮ ಸಮಕ್ಷಮ ಮಧ್ಯಾಹ್ನ 04.00 ರಿಂದ 04.45 ರ ಸಮಯದಲ್ಲಿ ಮಹಜರ್ ಮಾಡಿ ಅಲ್ಲೇ ನನ್ನ ಸಹಿ ಪಡೆದಿದ್ದಾರೆ ಎಂದರೆ ಸರಿಯಲ್ಲ. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ** ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸುತ್ತಾರೆ.

(ಸಾಕ್ಷಿ ಹೇಳಿದಂತೆ ಹೇಳಿಕೆಯನ್ನು ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಿ ಓದಿ ಹೇಳಿದ್ದು ಸಾಕ್ಷಿ ಸರಿ ಇರುವುದಾಗಿ ಒಪ್ಪಿರುತ್ತಾರೆ ಎಂದು ದೃಡೀಕರಿಸುತ್ತೇನೆ)

ಓ ಹೇ ಸಾ ಸ ಸಹಿ ಮಾಡಿದ್ದಾರೆ,

(ವಿ. ಎಂ. ಆನಂದಶೆಟ್ಟಿ)
ಎರಡನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು